**ಪದವಿ ಕಾಲೇಜು ಮಂಜೂರಾತಿ**
**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 18 : (30)**

**ಶ್ರೀ ಕುಲಕರ್ಣಿ ಶ್ರೀಕಾಂತ್ ಸುಬ್ಬಾರಾವ್ (ಜಮಖಂಡಿ)**

ಅ) ಶೈಕ್ಷಣಿಕವಾಗಿ ಮುಂದುವರಿದ ಭಾರಿ ಜನಸಂಖ್ಯೆಯಿಂದ ತುಂಬಿರುವ ಜಮಖಂಡಿ ಪಟ್ಟಣದಲ್ಲಿ ಪದವಿ ಕಾಲೇಜು ಇಲ್ಲದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ:

ಆ) ಬಡ ಮಕ್ಕಳ ಶಿಕ್ಷಣಕ್ಕಾಗಿ ಪ್ರಸಕ್ತ ಸಾಲಿನಲ್ಲಿ ಸರ್ಕಾರ ಒಂದು ಪದವಿ ಕಾಲೇನ್ನು ಪ್ರಾರಂಭಿಸಲು ಕ್ರಮ ಕೈಗೊಳ್ಳುವುದೇ?

**ಶ್ರೀ ಸಿ.ಟಿ.ರವಿ (ಮಾನ್ಯ ಉನ್ನತ ಶಿಕ್ಷಣ ಸಚಿವರು)**

ಅ) ಬಂದಿದೆ.

ಆ) ವಿದ್ಯಾರ್ಥಿಗಳ ಸಂಖ್ಯೆ ಜಮೀನಿನ ಲಭ್ಯತೆ ಹಾಗೂ ಅನುದಾನದ ಲಭ್ಯತೆಯನ್ನು ಆಧರಿಸಿ ಜಮಖಂಡಿ ಪಟ್ಟಣದಲ್ಲಿ ಸರ್ಕಾರಿ ಕಾಲೇಜನ್ನು ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗುವುದು.

**ಜಾವಗಲ್ ಪ್ರಾಥಮಿಕ ಆರೋಗ್ಯ ಕೇಂದ್ರ**
**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 33 : (11)**

**ಶ್ರೀ ರುದ್ರೇಶ್ ಗೌಡ ವೈ. ಎನ್. (ಬೇಲೂರು)**

ಅ) ಬೇಲೂರು ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಯ ಜಾವಗಲ್ ಗ್ರಾಮದಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹೋಬಳಿ ಕೇಂದ್ರವಾಗಿರುವ ಜಾವಗಲ್ ಗ್ರಾಮದ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಸಮುದಾಯ ಆಸ್ಪತ್ರೆಯನ್ನಾಗಿ ಮೇಲ್ದರ್ಜೆಗೇರಿಸಲು

ಸರ್ಕಾರವು ಕೈಗೊಂಡ ಕ್ರಮಗಳೇನು; ಈ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಯಾವಾಗ ಮೇಲ್ದರ್ಜೆಗೇರಿಸಲಾಗುವುದು?

**ಶ್ರೀ ಅರವಿಂದ ಲಿಂಬಾವಳಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)**

ಅ) ಹೌದು

ಆ) ಹಾಸನ ಜಿಲ್ಲೆ, ಅರಸೀಕೆರೆ ತಾಲ್ಲೂಕಿನ ಗ್ರಾಮೀಣ ಜನಸಂಖ್ಯೆ 257840 ಇದ್ದು, ಈ ತಾಲ್ಲೂಕಿನಲ್ಲಿ 2 ಸಮುದಾಯ ಆರೋಗ್ಯ ಕೇಂದ್ರಗಳು (ಗಂಡಸಿ ಮತ್ತು ಜೆ.ಸಿ. ಪುರ) ಕಾರ್ಯನಿರ್ವಹಿಸುತ್ತಿವೆ. ಇನ್ನೂ ಹೆಚ್ಚಿನ ಸಮುದಾಯ ಆರೋಗ್ಯ ಕೇಂದ್ರ ಸ್ಥಾಪನೆಗೆ ಅವಕಾಶವಿರುವುದಿಲ್ಲ.

ಸರ್ಕಾರದ ಆದೇಶ ಸಂಖ್ಯೆ:ಆಕುಕ/350/ಸಿಜಿಎಂ/2010, ದಿನಾಂಕ: 11–01–2011ರಲ್ಲಿ ರಾಜ್ಯದಲ್ಲಿ ಹೊಸ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಸ್ಥಾಪಿಸುವುದು ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರಗಳು, ಸಮುದಾಯ ಆರೋಗ್ಯ ಕೇಂದ್ರಗಳು ಮತ್ತು ಸಾರ್ವಜನಿಕ ಆಸ್ಪತ್ರೆ ಇತ್ಯಾದಿಗಳ ಮೇಲ್ದರ್ಜೆಗೇರಿಸುವುವಿಕೆಯನ್ನು ಒಂದು ನೀತಿ ನಿರ್ಣಯವಾಗಿ ತಕ್ಷಣದಿಂದ ಜಾರಿಗೆ ಬರುವಂತೆ 3 ವರ್ಷಗಳ ಅವಧಿಗೆ ಸರ್ಕಾರವು ತಡೆಹಿಡಿದಿದೆ.

## ಪ್ರಾಥಮಿಕ ಶಾಲಾ ಪಠ್ಯ ಪುಸ್ತಕಗಳಲ್ಲಿ ಬಲಪಂಥೀಯ ಧೋರಣೆ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 16 : (52)

**ಶ್ರೀ ಖಾದರ್ ಯು.ಟಿ.** (ಮಂಗಳೂರು ಅ) ಸರ್ಕಾರಿ ಪ್ರಾಥಮಿಕ ಶಾಲಾ ಪಠ್ಯ ಪುಸ್ತಕಗಳಲ್ಲಿ ಬಲಂಪಥೀಯ ಧೋರಣೆಯ ಬಗ್ಗೆ ಮುದ್ರಿಸಿ ವಿದ್ಯಾರ್ಥಿಗಳಿಗೆ ಮಾಹಿತಿ (ಶಿಕ್ಷಣ) ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ, ಬಲಪಂಥೀಯ ಧೋರಣೆ ಪಠ್ಯಪುಸ್ತಕಗಳನ್ನು ನಿಷೇಧಿಸಿ ಮಕ್ಕಳಲ್ಲಿ ಸೌಹಾರ್ಧತೆ ಸಹಬಾಳ್ವೆ ಹಾಗೂ ಶಾಂತಿಗೆ ಒತ್ತ ಕೊಡುವ ಪಠ್ಯಪುಸ್ತಕಗಳನ್ನು ಮುದ್ರಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ?